ಉಳಿದ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೊಳ್ಳಲಾಗುವುದು

771 (934) ಶ್ರೀ ವಿಶ್ವನಾಥ ಹೆಚ್ ಎಂ (ಸಕಲೇಶಪುರ) –ಕೃಷಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) 2006 ನೇ ಸಾಲಿನಲ್ಲಿ ಸಕಲೇಶಪುರ ತಾಲ್ಲೂಕಿಗೆ ಕೃಷಿ ಇಲಾಖಾವತಿಯಿಂದ ರೈತರು ಎತ್ತು–ಗಾಡಿ ಕೊಳ್ಳಲು ನಿಗದಿಪಡಿಸಲಾದ ಧನ ಸಹಾಯವೆಷ್ಟು,

(ಆ) 2006 ನೇ ಸಾಲಿನ ಫಲಾನುಭವಿಗಳ ಪಟ್ಟಿಯನ್ನು ಸಹಾಯಕ ನಿರ್ದೇಶಕರಿಗೆ ನೀಡಿದ್ದರೂ ಫಲಾನುಭವಿಗಳಿಗೆ ಧನ ಸಹಾಯ ನೀಡದಿರಲು ಕಾರಣವೇನು,

(ಇ) ಈ ವಿಷಯಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟವರ ವಿರುದ್ಧ ಸರ್ಕಾರದ ಕ್ರಮವೇನು ?

ಶ್ರೀ ಬಂಡೆಪ್ಪ ಕಾಶಂಪೂರ (ಕೃಷಿ ಸಚಿವರು) –

(ಅ) 2006–07 ನೇ ಸಾಲಿನಲ್ಲಿ ಸಕಲೇಶಪುರ ತಾಲ್ಲೂಕಿಗೆ ಎತ್ತು–ಗಾಡಿ ಕೊಳ್ಳಲು ನಿಗದಿಪಡಿಸಲಾದ ಸಹಾಯಧನ ರೂ 6 00 ಲಕ್ಷ

(ಆ) ಫಲಾನುಭವಿಗಳ ಪಟ್ಟಿಯನ್ನು ತಾಲ್ಲೂಕು ಮಟ್ಟದ ಸಮಿತಿ ಅನುಮೋದಿಸಿದ್ದರೂ ಸಹ ಪ್ರಭಾರ ಸಹಾಯಕ ಕೃಷಿ ನಿರ್ದೇಶಕರು, ಸಕಲೇಶಪುರ ಇವರು ಸಕಾಲದಲ್ಲಿ ಅಗತ್ಯ ಕ್ರಮ ಕೈಗೊಳ್ಳದಿರುವುದರಿಂದ 2006–07 ನೇ ಸಾಲಿನಲ್ಲಿ ಫಲಾನುಭವಿಗಳಿಗೆ ರಿಯಾಯಿತಿ ಸೌಲಭ್ಯ ನೀಡಲು ಸಾಧ್ಯವಾಗಿರುವುದಿಲ್ಲ

(ಇ) ತಪ್ಪಿತಸ್ಥ ಅಧಿಕಾರಿ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು

772 (828) ಶ್ರೀ ಯಾದವಾಡ್ ಮಹಾದೇವಪ್ಪ ಶಿವಲಿಂಗ (ರಾಮದುರ್ಗ) – ಕೃಷಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

(ಅ) ಬೆಳಗಾವಿ ಜಿಲ್ಲೆಗೆ ಕಳೆದ ಮೂರು ಸಾಲಿನಲ್ಲಿ ಜಲಾನಯನ ಇಲಾಖೆಯಿಂದ ಅನುಷ್ಠಾನಗೊಳಿಸಿದ ಯೋಜನೆಗಳಾವುವು ? ಅವುಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು),

(ಆ) ಕಳೆದ ಮೂರು ವರ್ಷಗಳಿಂದ ರಾಮದುರ್ಗ ತಾಲ್ಲೂಕಿನಲ್ಲಿ ಜಲಾನಯನ ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ? ಏಜನ್ಸಿ (ಎನ್ ಜಿ ಓ) ಗಳಿಂದ ಅನುಷ್ಠಾನಗೊಳಿಸಿದ